ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2001ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಆ) ಕರ್ನಾಟಕ ಧನವಿನಿಯೋಗ ವಿಧೇಯಕ, 2001
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು : "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2001ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(೫) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2001
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2001ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವನೆಯನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2001ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು : "ಖಂಡ 2 ರಿಂದ 10ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 10ರವರೆಗೆ ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."